**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.**

**ಸಿ.ಸಿ. ಸಂಖ್ಯೆ 844/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : **ಎ 1.** ಮನು ಎಸ್.
ತಂದೆ – ಲೇಟ್ ಸ್ವಾಮಿ ನಾಯಕ,
ವಯಸ್ಸು ಸುಮಾರು 28 ವರ್ಷ,
ವಾಸಃ ಸಾಲಿಗ್ರಾಮ,
ಕೆ.ಆರ್.ನಗರ ತಾಲ್ಲೂಕು,
ಮೈಸೂರು ಜಿಲ್ಲೆ.

**ದೋಷಾರೋಪಣೆ**

ಶ್ರೀಮತಿ ನಮ್ರತಾ ಎಸ್. ಹೊಸಮಠ, ಬಿ.ಎ., ಎಲ್.ಎಲ್.ಬಿ., 1 ನೇ ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ಬಿಳಿಕೆರೆ ಪೋಲಿಸ್ ಠಾಣಾ ಸರಹದ್ದಿಗೆ ಸೇರಿದ ಉಯಿಗೌಡನಹಳ್ಳಿ ಗ್ರಾಮದ ಚಾಸಾ.1 ರವರ ಮನೆಯಲ್ಲಿ ಒಡವೆಗಳನ್ನು ಇಟ್ಟು ಪೂಜೆಯನ್ನು ಮಾಡುವಂತೆ ಚೌಡೇಶ್ವರಿ ದೇವಸ್ಥಾನದ ಪೂಜಾರಿಯಾದ ಆರೋಪಿಯಾದ ನೀವು ತಿಳಿಸಿದ್ದರಿಂದ, ಚಾಸಾ.1 ರವರು ದಿಃ05.06.2020 ರಂದು ತನ್ನ ಮನೆಯಲ್ಲಿ ಪೂಜೆ ಕಾರ್ಯಕ್ರಮವನ್ನು ಏರ್ಪಡಿಸಿದ್ದು, ಆ ಪೂಜೆಯನ್ನು ಮಾಡುವಾಗ ಚಿನ್ನದ ಒಡವೆಗಳನ್ನು ದೇವರ ಮುಂದೆ ಇಟ್ಟು ಪೂಜೆ ಮಾಡಿ ನಂತರ ಆ ಒಡವೆಗಳನ್ನು ಬೀರುವಿನಲ್ಲಿಟ್ಟು ಆಯುಧ ಪೂಜೆ ದಿವಸ ತೆಗೆದರೆ ಒಳ್ಳೆಯದಾಗುತ್ತದೆ ಎಂದು ತಿಳಿಸಿದ್ದರಿಂದ

ಚಾಸಾ.1 ರವರಿಗೆ ಸೇರಿದ 119.3 ಗ್ರಾಂ ತೂಕದ ಚಿನ್ನದ ಒಡವೆಗಳನ್ನು, ಚಾಸಾ.2 ರವರಿಗೆ ಸೇರಿದ 21.3 ಗ್ರಾಂ ತೂಕದ ಚಿನ್ನದ ನೆಕ್ಲೆಸ್, ಚಾಸಾ.3 ರವರಿಗೆ ಸೇರಿದ 28.3 ಗ್ರಾಂ ತೂಕದ ಚಿನ್ನದ ಒಡವೆಗಳನ್ನು, ಚಾಸಾ.4 ರವರಿಗೆ ಸೇರಿದ 87 ಗ್ರಾಂ ತೂಕದ ಚಿನ್ನದ ಒಡವೆಗಳನ್ನು, ಚಾಸಾ.5 ರವರಿಗೆ ಸೇರಿದ 9.2 ಗ್ರಾಂ ತೂಕದ ಚಿನ್ನದ ಓಲೆಗಳನ್ನು, ಚಾಸಾ.6 ರವರಿಗೆ ಸೇರಿದ 115.6 ಗ್ರಾಂ ತೂಕದ ಚಿನ್ನದ ಒಡವೆಗಳನ್ನು ಚಾಸಾ.7 ರವರಿಗೆ ಸೇರಿದ 39.7 ಗ್ರಾಂ ತೂಕದ ಚಿನ್ನದ ಒಡವೆಗಳನ್ನು ಚಾಸಾ.8 ರವರಿಗೆ ಸೇರಿದ 33.2 ಗ್ರಾಂ ತೂಕದ ಚಿನ್ನದ ಒಡವೆಗಳನ್ನು ಅಂದಾಜು ಒಟ್ಟು 21 ಲಕ್ಷ ರೂ ಬೆಲೆ ಬಾಳುವ 453.6 ಗ್ರಾಂ ತೂಕದ ಚಿನ್ನದ ಒಡವೆಗಳನ್ನು ದೇವರ ಮುಂದೆ ಇಟ್ಟು ಪೂಜೆಯನ್ನು ಮಾಡಿದ ನಂತರ ಆ ಎಲ್ಲಾ ಚಿನ್ನದ ಒಡವೆಗಳನ್ನು ಚಾಸಾ.1 ರವರು ತನ್ನ ಕೊಠಡಿಯಲ್ಲಿರುವ ಬೀರುವಿನಲ್ಲಿಟ್ಟು ಬೀರುವಿಗೆ ಬೀಗವನ್ನು ಹಾಕದೆ ಕೊಠಡಿಯಿಂದ ವಾಪಸ್ಸು ಬಂದ ನಂತರ ಆರೋಪಿಯಾದ ನೀವು ಬಟ್ಟೆಯನ್ನು ಬದಲಾಯಿಸುವ ನೆಪದಲ್ಲಿ ಚಾಸಾ.1 ರವರ ಚಿನ್ನದ ಒಡವೆಗಳನ್ನು ಇಟ್ಟಿದ್ದ ಕೊಠಡಿಗೆ ಹೋಗಿ ಆ ಕೊಠಡಿಯ ಬೀರುವಿನಲ್ಲಿಟ್ಟಿದ್ದ 453.6 ಗ್ರಾಂ ತೂಕದ ಚಿನ್ನದ ಒಡವೆಗಳನ್ನು ಬೀರುವಿನಿಂದ ಕಳ್ಳತನ ಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ **380 ರ** ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಯಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ನಮ್ರತಾ ಎಸ್. ಹೊಸಮಠ)**

ದಿನಾಂಕಃ **02.06.2026**

**1** ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾದಂಡಾಧಿಕಾರಿಗಳು, ಹುಣಸೂರು.

**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.**

**ಸಿ.ಸಿ. ಸಂಖ್ಯೆ 844/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ಮನು

ಭಾರತೀಯ ದಂಡ ಸಂಹಿತೆ ಕಲಂ 240(2) ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

**(ನಮ್ರತಾ ಎಸ್. ಹೊಸಮಠ)**

ದಿನಾಂಕಃ **02.06.2026** 1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂಡಾಧಿಕಾರಿಗಳು, ಹುಣಸೂರು.